ಕರ್ನಾಟಕ ಸರ್ಕಾರ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

## ತ್ಯಾಜ್ಯದಿಂದ ಅಲಂಕಾರಿಕ ವಸ್ತುಗಳು, ಹೂವಿನ ಕುಂಡ ತಯಾರಿ;

# ಚಿಕ್ಕಮಗಳೂರಿನ ಮಹಿಳೆಯರ ಪ್ರಾಯೋಗಿಕ ಚಿಂತನೆ ರಾಜ್ಯಕ್ಕೆ ಮಾದರಿ

'ಸ್ವಚ್ಛತೆಯೇ ಸೇವೆ' ಆಂದೋಲನದ ಭಾಗವಾಗಿ ರಾಜ್ಯದಲ್ಲಿ ಬೃಹತ್ ಮಟ್ಟದ ಸ್ವಚ್ಛತಾ ಶ್ರಮದಾನ ಚಟುವಟಿಕೆಗಳು, ಕೆರೆ, ಕಲ್ಯಾಣಿಗಳ ಪುನಶ್ಚೇತನ ಕಾರ್ಯಗಳು, ಜಾಗೃತಿ ಜಾಥಾಗಳು ನಡೆಯುತ್ತಿವೆ. ವಿವಿಧ ಸಂಘಟನೆಗಳು, ಸ್ವಚ್ಛತಾ ರಾಯಭಾರಿಗಳು, ಸ್ವಸಹಾಯ ಸಂಘದ ಮಹಿಳೆಯರು, ಶಾಲಾ-ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕರು ಸಾಮೂಹಿಕವಾಗಿ ತಮ್ಮ ಗ್ರಾಮಗಳಲ್ಲಿ ಸ್ವಚ್ಛತಾ ಆಂದೋಲನದಲ್ಲಿ ಭಾಗಿಯಾಗುತ್ತಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯಲ್ಲಿಯೂ 'ಸ್ವಚ್ಛತೆಯೇ ಸೇವೆ' ಆಂದೋಲನವನ್ನು ಯಶಸ್ವಿಯಾಗಿ ಕೈಗೊಳ್ಳಲಾಗಿದ್ದು, ಸಂಪೂರ್ಣ ಸ್ವಚ್ಛತೆಯನ್ನು ಸಾಧಿಸುವ ಗುರಿಯೊಂದಿಗೆ ಸ್ವಚ್ಛತಾ ಕಾರ್ಯಗಳು ನಡೆಯುತ್ತಿವೆ. ಉದ್ಯಾನವನಗಳು, ಬೀದಿಗಳು ಮತ್ತು ಸಮುದಾಯ ಕೇಂದ್ರಗಳನ್ನು ಒಳಗೊಂಡಂತೆ ಸಾರ್ವಜನಿಕ ಸ್ಥಳಗಳನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಲಾಗುತ್ತಿದೆ.

ಸ್ವಚ್ಛತೆಯೂ ಎಷ್ಟು ಮುಖ್ಯವೋ ತ್ಯಾಜ್ಯಗಳನ್ನು ಸಂಪೂರ್ನ್ಮೂಲವಾಗಿ ಪರಿವರ್ತಿಸುವುದು, ತ್ಯಾಜ್ಯಗಳ ಮರುಬಳಕೆಯೂ ಅಷ್ಟೇ ಮಹತ್ವ ಪಡೆದುಕೊಳ್ಳುತ್ತದೆ. ಪ್ಲಾಸ್ಟಿಕ್ ತ್ಯಾಜ್ಯ, ಗಾಜಿನ ಬಾಟಲಿಗಳು, ಪೇಂಟ್ ಡಬ್ಬಗಳನ್ನು ಮರುಬಳಕೆ ಮಾಡುವುದರಿಂದ ಉತ್ಪತ್ತಿಯಾಗುವ ತ್ಯಾಜ್ಯದ ಪ್ರಮಾಣವನ್ನು ಗಣನೀಯವಾಗಿ ಕಡಿಮೆ ಮಾಡಬಹುದು. ಪ್ಲಾಸ್ಟಿಕ್ ನಂತಹ ಪರಿಸರಕ್ಕೆ ಹಾನಿಕಾರಕವಾದ ವಸ್ತುಗಳ ಬಳಕೆಯನ್ನು ಕಡಿಮೆ ಮಾಡುವುದರ ಜೊತೆ ರೀಸೈಕ್ಲಿಂಗ್ ಪ್ರಕ್ರಿಯೆಗೆ ಉತ್ತೇಜನ ನೀಡುವುದು ಪರಿಸರ ಮಾಲಿನ್ಯ ಕಡಿಮೆ ಮಾಡಲು ಇರುವ ಉತ್ತಮ ಮಾರ್ಗ. ಈ ನಿಟ್ಟಿನಲ್ಲಿ ಚಿಕ್ಕಮಗಳೂರು ಜಿಲ್ಲೆ ರಾಜ್ಯಕ್ಕೆ ಮಾದರಿಯಾಗಿದೆ.

ಸ್ವಚ್ಛತೆಯೇ ಸೇವೆ ಆಂದೋಲನದ ಹಿನ್ನೆಲೆ ನಡೆದ ಸ್ವಚ್ಛತಾ ಶ್ರಮದಾನ ಚಟುವಟಿಕೆ ವೇಳೆ ಸಂಗ್ರಹಿಸಲಾದ ಗಾಜಿನ ಬಾಟಲಿಗಳು, ಪ್ಲಾಸ್ಟಿಕ್ ತ್ಯಾಜ್ಯ, ಟೈರ್ ಗಳನ್ನು, ಸ್ವಚ್ಛ ಸಂಕೀರ್ಣದಲ್ಲಿ ಕೆಲಸ ಮಾಡುವ ಒಕ್ಕೂಟದ ಮಹಿಳೆಯರು ಸುಂದರ ಅಲಂಕಾರಿಕ ವಸ್ತುಗಳು ಹಾಗೂ ಹೂವಿನ ಕುಂಡಗಳಾಗಿ ಮಾರ್ಪಡಿಸಿದ್ದಾರೆ. ಈ ಮೂಲಕ ಕಸದಿಂದ ರಸ ತೆಗೆಯುವ ಸೃಜನಾತ್ಮಕ ಕಲೆಯನ್ನು ಪ್ರದರ್ಶಿಸಿ ಇತರರಿಗೂ ಮಾದರಿಯಾಗಿದ್ದಾರೆ.




ಪ್ಲಾಸ್ಟಿಕ್ ಬಾಟಲಿಗಳು, ಗಾಜಿನ ಬಾಟಲಿಗಳನ್ನು ಎಲ್ಲೆಂದರಲ್ಲಿ ಬಿಸಾಕಿ ಪರಿಸರಕ್ಕೆ ಹಾನಿ ಮಾಡುವ ಬದಲು ಮನೆ ಬಳಕೆಗೆ ಬೇಕಾದ ಅಲಂಕಾರಿಕ ವಸ್ತುಗಳನ್ನು ತಯಾರಿಸಿಕೊಳ್ಳಬಹುದು, ಸುಂದರ ಹೂ ಗಿಡಗಳನ್ನು ಡಬ್ಬಗಳಲ್ಲಿ ಬೆಳೆಸಬಹುದು ಎನ್ನುವ ಸಂದೇಶವನ್ನು ರವಾನಿಸಿದ್ದಾರೆ. ಅಲ್ಲದೆ, ಈ ರೀತಿಯ ಪ್ರಾಯೋಗಿಕ ಪ್ರಯತ್ನಗಳಿಂದ ಮರುಬಳಕೆಯ ಜೊತೆಗೆ ತ್ಯಾಜ್ಯದ ಉತ್ಪತ್ತಿಯನ್ನು ತಗ್ಗಿಸಬಹುದು ಎನ್ನುವುದನ್ನು ಮರೆಯುವಂತಿಲ್ಲ.

ಸ್ವಚ್ಛತೆಯೇ ಸೇವೆ 2024
17 ಸೆಪ್ಟೆಂಬರ್- 2 ಅಕ್ಟೋಬರ್ 2024
"ಸ್ವಭಾವ ಸ್ವಚ್ಛತೆ, ಸಂಸ್ಕಾರ ಸ್ವಚ್ಛತೆ"

ಒಟ್ಟಿನಲ್ಲಿ ಈ ಬಾರಿಯ

## ಸ್ವಚ್ಛತೆಯೇ ಸೇವೆ ಆಂದೋಲನ

ಹಲವಾರು ವಿನೂತನ ಪ್ರಯೋಗಗಳು, ನವೀನ ಚಿಂತನೆಗಳಿಗೆ ಸಾಕ್ಷಿಯಾಗುತ್ತಿದೆ. ಸಂಪೂರ್ಣ ಸ್ವಚ್ಛತೆಯನ್ನು ಸಾಧಿಸುವಲ್ಲಿ, ಪರಿಸರ ಮಾಲಿನ್ಯ ತಡೆಯುವಲ್ಲಿ ಹಾಗೂ ಆರೋಗ್ಯಕರ, ಸುಸ್ಥಿರ ಪರಿಸರ ನಿರ್ಮಾಣದಲ್ಲಿ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯನ್ನು ತಿಳಿಸಿ ಜಾಗೃತಿ ಮೂಡಿಸುವ ಪ್ರಯತ್ನಗಳಾಗುತ್ತಿವೆ.

ಜಲೋತ್ಸವ ಸ್ವಚ್ಛ ಸಂಕೀರ್ಣ

8277506000
ಏಕೀಕೃತ ಸಹಾಯವಾಣಿ